C-7607

1/4/15

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಯಾಂತ್ರೀಕೃತ ಮೀನುಗಾರಿಕಾ ದೋಣಿಗಳು ಬಳಸುವ ಡೀಸೆಲ್ ಮೇಲೆ ಸಹಾಯಧನ ನೀಡುವ ಕುರಿತು – ಮೀನುಗಾರಿಕೆ ದೋಣಿಗಳಿಗೆ ಡೀಸಲ್ ಮಾರಾಟ ತೆರಿಗೆ ಮರುಪಾವತಿ

ಓದಲಾಗಿದೆ:- ಪತ್ರ ಸಂಖ್ಯೆ: ಮೀನಿ/57/ಪಂವಾಯೋ/2015,
ದಿನಾಂಕ: 31-03-2015.

******

## ಪ್ರಸ್ತಾವನೆ:

ರಾಜ್ಯ ಸರ್ಕಾರವು 2015-16ನೇ ಸಾಲಿನ ಆಯವ್ಯಯ ಭಾಷಣದಲ್ಲಿ "ಇನ್ನು ಮುಂದೆ ಮಾರಾಟ ಕರ ರಿಯಾಯಿತಿಯ ಬದಲು, ಯಾಂತ್ರೀಕೃತ ದೋಣಿಗಳಿಗೆ 1,50,000 ಕಿಲೋ ಲೀಟರ್ ಡೀಸೆಲ್ ಮೇಲೆ ಮಾರಾಟ ಕರವನ್ನು ಮರುಪಾವತಿಯ ರೂಪದಲ್ಲಿ ನೇರವಾಗಿ ದೋಣಿ ಮಾಲೀಕರ ಖಾತೆಗೆ ವರ್ಗಾಯಿಸಲಾಗುವುದು. ಇದಕ್ಕಾಗಿ 105 ಕೋಟಿ ರೂ.ಗಳ ಪ್ರತ್ಯೇಕ ಅನುದಾನವನ್ನು ಒದಗಿಸಲಾಗುವುದು" ಎಂದು ಘೋಷಿಸಿದೆ.

ಮೇಲೆ ಓದಲಾದ ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು ಇವರ ಪತ್ರದಲ್ಲಿ, 2015-16ನೇ ಸಾಲಿನ ಆಯವ್ಯಯದಲ್ಲಿ "ಮೀನುಗಾರಿಕೆ ದೋಣಿಗಳಿಗೆ ಡೀಸೆಲ್ – ಮಾರಾಟ ತೆರಿಗೆ ಮರುಪಾವತಿ" ಯೋಜನೆಯಡಿ ರೂ.105.02 ಕೋಟಿ ಪ್ರತ್ಯೇಕ ಅನುದಾನವನ್ನು ಒದಗಿಸಲಾಗಿದ್ದು, ಸದರಿ ಯೋಜನೆಯನ್ನು ದಿನಾಂಕ: 01-04-2015 ರಿಂದ ಜಾರಿಗೆ ತರಬೇಕಾಗಿದೆ. ಹಾಗೂ ಇದನ್ನು ಅನುಷ್ಠಾನಗೊಳಿಸಲು ಮೀನುಗಾರಿಕೆ ಯಾವುದೇ ತೊಂದರೆ ಆಗದಂತೆ ಮುಂಗಡವಾಗಿ ಸಹಾಯಧನ ಹಣವನ್ನು ಮೀನುಗಾರರ ಬ್ಯಾಂಕಿನ ಖಾತೆಗಳಿಗೆ ಆರ್.ಟಿ.ಜಿ.ಎಸ್. ಮುಖಾಂತರ ನೀಡಬೇಕಾಗಿರುವುದರಿಂದ, ಏಪ್ರಿಲ್-2015 ರ ಮಾಹೆಗೆ ಅಗತ್ಯವಿರುವ ರೂ.10.69 ಕೋಟಿ ಅನುದಾನವನ್ನು ಲೆಕ್ಕ ಶೀರ್ಷಿಕೆ 2405-00-103-0-23 "ಮೀನುಗಾರಿಕೆ ದೋಣಿಗಳಿಗೆ ಡೀಸೆಲ್ ಮಾರಾಟ ತೆರಿಗೆ ಮರುಪಾವತಿ" ರಲ್ಲಿ ಒದಗಿಸಿದ ಅನುದಾನದಲ್ಲಿ ಭರಿಸಲು ಬಿಡುಗಡೆ ಮಾಡಲು ಕೋರಿರುತ್ತಾರೆ.

ಮುಂದುವರೆದು, ಯಾಂತ್ರೀಕೃತ ಮೀನುಗಾರಿಕೆ ದೋಣಿಗಳು ದಿನಾಂಕ: 01-04-2015 ರ ನಂತರ ಬಳಸುವ ಡೀಸೆಲ್ ಖರೀದಿಗೆ ಸಂಬಂಧಿಸಿದಂತೆ ಕರಸಹಿತ ಮೊತ್ತವನ್ನು ಸದರಿ ದೋಣಿಗಳ ಮಾಲೀಕರು ಸಂಬಂಧಿಸಿದ ಡೀಸೆಲ್ ಬಂಕ್‌ಗಳಿಗೆ ಪಾವತಿಸಬೇಕಾಗಿದ್ದು, ಈ ಸಂಬಂಧ ಖರೀದಿಸಿದ ಡೀಸೆಲ್ ಮೇಲಿನ ಕರದ ಸಹಾಯಧನವನ್ನು ಮಾಲೀಕರ ಬ್ಯಾಂಕ್ ಖಾತೆಗೆ ಆರ್.ಟಿ.ಜಿ.ಎಸ್. ಮುಖಾಂತರ ವರ್ಗಾಯಿಸಲು ಕ್ರಮವಹಿಸಲಾಗುವುದೆಂದು ಹಾಗೂ ಮುಕ್ತ ಮಾರುಕಟ್ಟೆ ದರದಲ್ಲಿ ಡೀಸೆಲ್ ಖರೀದಿಸಲು ಸಂಬಂಧಿಸಿದ ಡೀಸೆಲ್ ಬಂಕ್ ಹಾಗೂ ಯಾಂತ್ರೀಕೃತ ಮೀನುಗಾರಿಕೆ ದೋಣಿಗಳ ಮಾಲೀಕರಿಗೆ ನಿರ್ದೇಶನ / ಸೂಚನೆ ನೀಡಲು ಅನುಮತಿ ನೀಡುವಂತೆ ಕೋರಿರುತ್ತಾರೆ.

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಪಸಂಮೀ 68 ಮೀಇಯೋ 2015, ಬೆಂಗಳೂರು ದಿನಾಂಕ: 01-04-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಯಾಂತ್ರೀಕೃತ ಮೀನುಗಾರಿಕಾ ದೋಣಿಗಳು ಬಳಸುವ ಡೀಸೆಲ್ ಮೇಲೆ ಸಹಾಯಧನ ನೀಡಲು ಏಪ್ರಿಲ್-2015 ರ ತಿಂಗಳಿಗೆ ಅಗತ್ಯವಿರುವ ರೂ.1069.00 ಲಕ್ಷ (ಒಂದು ಸಾವಿರದ ಅರವತ್ತೊಂಬತ್ತು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು 2015-16ನೇ ಸಾಲಿನ ಯೋಜನಾ ಲೆಕ್ಕ ಶೀರ್ಷಿಕೆ 2405-00-103-0-23 ಅಡಿ ಬಿಡುಗಡೆ ಮಾಡಲಾಗಿದೆ.

ಸದರಿ ಅನುದಾನವನ್ನು ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು ಇವರು ಎ.ಸಿ. ಬಿಲ್ಲುಗಳ ಮುಖಾಂತರ ಸೆಳೆದು, ಮೀನುಗಾರಿಕೆ ಉಪ ನಿರ್ದೇಶಕರು, ಮಂಗಳೂರು ಮತ್ತು ಕಾರವಾರ ಇವರಿಗೆ ಬಿಡುಗಡೆ ಮಾಡಿ ಸಂಬಂಧಿಸಿದ ಮೀನುಗಾರರ ದೋಣಿಗಳ ಮಾಲೀಕರ ಬ್ಯಾಂಕ್ ಖಾತೆಗೆ ಆರ್.ಟಿ.ಜಿ.ಎಸ್. ಮುಖಾಂತರ ವರ್ಗಾಯಿಸಲು ಮಂಜೂರಾತಿ ನೀಡಲಾಗಿದೆ.

ಯಾಂತ್ರೀಕೃತ ಮೀನುಗಾರಿಕೆ ದೋಣಿಗಳು ದಿನಾಂಕ: 01-04-2015 ರ ನಂತರ ಕರಸಹಿತ ಖರೀದಿಸುವ ಡೀಸೆಲ್ ಮೇಲಿನ ಕರದ ಸಹಾಯಧನವನ್ನು ಸದರಿ ಯಾಂತ್ರೀಕೃತ ಮೀನುಗಾರಿಕೆ ದೋಣಿಗಳ ಮಾಲೀಕರ ಬ್ಯಾಂಕ್ ಖಾತೆಗೆ ಆರ್.ಟಿ.ಜಿ.ಎಸ್. ಮುಖಾಂತರ ವರ್ಗಾಯಿಸಲು ಕ್ರಮವಹಿಸತಕ್ಕದ್ದು ಹಾಗೂ ಮುಕ್ತ ಮಾರುಕಟ್ಟೆ ದರದಲ್ಲಿ ಡೀಸೆಲ್ ಖರೀದಿಸಲು ಸಂಬಂಧಿಸಿದ ಡೀಸೆಲ್ ಬಂಕ್ ಹಾಗೂ ಯಾಂತ್ರೀಕೃತ ಮೀನುಗಾರಿಕೆ ದೋಣಿಗಳ ಮಾಲೀಕರಿಗೆ ನಿರ್ದೇಶನ / ಸೂಚನೆ ನೀಡಲು ಅನುಮತಿ ನೀಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ/353/ವೆಚ್ಚ-4/2015, ದಿನಾಂಕ: 01-04-2015 ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

1/4/15

(ರಶ್ಮಿ ಶಿವಶಂಕರ ಮೋಳ)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

1/4

**ಇವರಿಗೆ:**

1) ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.
3) ಜಂಟಿ ನಿರ್ದೇಶಕರು, ಖಜಾನೆ ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ಬೆಂಗಳೂರು.
4) ಆಂತರಿಕ ಆರ್ಥಿಕ ಸಲಹೆಗಾರರು, ಕೃ.ತೋ. ಮತ್ತು ಪ.ಸಂ.ಮೀ. ಇಲಾಖೆ,
5) ಮೀನುಗಾರಿಕೆ ಉಪ ನಿರ್ದೇಶಕರು, ಮಂಗಳೂರು / ಕಾರವಾರ.
6) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವೆಚ್ಚ-4.
7) ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
8) ಶಾಖಾ ರಕ್ಷಾ ಕಡತ / ಸಮನ್ವಯ-ಕಂಪೆಂಡಿಯಂ / ಹೆಚ್ಚಿನ ಪ್ರತಿಗಳು.